ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು	:	ಶ್ರೀ ಶಾಂತರಾಮ ಬುಡ್ನ ಸಿದ್ದಿ (ನಾಮನಿರ್ದೇಶಿತರು)
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	**305**
ಉತ್ತರಿಸಬೇಕಾದ ದಿನಾಂಕ	:	15.12.2021
ಉತ್ತರಿಸಬೇಕಾದ ಸಚಿವರು	:	ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಬುಡಕಟ್ಟು ಸಮುದಾಯದ ಅನೇಕ ಕುಟುಂಬಗಳಿಗೆ ಗ್ರಾಮ ಪಂಚಾಯ್ತಿಗಳಲ್ಲಿ ಮನೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;	ರಾಜ್ಯದಲ್ಲಿ ಬುಡಕಟ್ಟು ಸಮುದಾಯವನ್ನೂ ಒಳಗೊಂಡಂತೆ ಗ್ರಾಮೀಣ ಪ್ರದೇಶದ ಎಲ್ಲಾ ಸಮುದಾಯಗಳಲ್ಲಿನ ವಸತಿ ರಹಿತ/ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯವನ್ನು ಕಲ್ಪಿಸಿ ಕೊಡಲು ಸರ್ಕಾರವು ಕೆಳಕಂಡ ವಿವಿಧ ವಸತಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. • ಡಾ॥ ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ • ದೇವರಾಜು ಅರಸು ವಸತಿ ಯೋಜನೆ (ಅಂಗವಿಕಲರು, ವಿಧವೆಯರು, ನಿರ್ಗತಿಕರು, ಹಮಾಲರು, ಕುಶಲ ಕರ್ಮಿಗಳು ಮುಂತಾದ 14 ವಿಶೇಷ ವರ್ಗಗಳು) • ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾಮೀಣ) • ಬಸವ ವಸತಿ ಯೋಜನೆ ಸದರಿ ಯೋಜನೆಗಳಡಿ ಬುಡಕಟ್ಟು ಸಮುದಾಯಕ್ಕೆ ಸೇರಿದ ವಸತಿ ರಹಿತರನ್ನೂ ಒಳಗೊಂಡಂತೆ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ, ಅಲ್ಪಸಂಖ್ಯಾತ ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದ ಅರ್ಹ ಫಲಾನುಭವಿಗಳನ್ನು ನಿಯಮಾನುಸಾರ ಆಯ್ಕೆಗೊಳಿಸಿ ವಸತಿ ಸೌಕರ್ಯ ಕಲ್ಪಿಸಿ ಕೊಡಲು ಅವಕಾಶ ಕಲ್ಪಿಸಿ ಕೊಡಲಾಗಿದ್ದು, ಈ ಸಮುದಾಯಕ್ಕೆ ಪ್ರತ್ಯೇಕವಾದ ವಸತಿ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವುದಿಲ್ಲ.
(ಆ)	ಹಾಗಿದ್ದಲ್ಲಿ, ಗ್ರಾಮ ಪಂಚಾಯಿತಿಗಳಿಗೆ ಮನೆ ಮಂಜೂರು ಮಾಡಿಕೊಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)	ಪ್ರಸಕ್ತ ವರ್ಷ ಅಂದರೆ 2021-22 ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ ವಇ 44 ಹೆಚ್‌ಎಹೆಚ್ 2021(ಭಾಗ-1),ದಿನಾಂಕ:31.07.2021 ರಲ್ಲಿ ರಾಜ್ಯ ವಸತಿ ಯೋಜನೆಯಡಿ 1 ಲಕ್ಷ ಮನೆಗಳ ಗುರಿಯನ್ನು ಹಾಗೂ ಆದೇಶ ಸಂಖ್ಯೆ:ವಇ 44 ಹೆಚ್ ಎಹೆಚ್ 2021(ಭಾಗ-1), ದಿನಾಂಕ:09.09.2021 ರಲ್ಲಿ ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಡಿ 4 ಲಕ್ಷ ಹೊಸ ಮನೆಗಳ ಗುರಿ ಒಟ್ಟಾರೆಯಾಗಿ 5 ಲಕ್ಷ ಮನೆಗಳ ಗುರಿಗೆ ಎದುರಾಗಿ ಅರ್ಹ ಫಲಾನುಭವಿಗಳ ಆಯ್ಕೆಯನ್ನು ಪ್ರಾರಂಭಿಸುವಂತೆ ಸೂಚಿಸಿ, ಆದೇಶ ನೀಡಲಾಗಿದೆ.

ಸಂಖ್ಯೆ :ವಇ 424 ಹೆಚ್ಎಎಂ 2021

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು